**ಪಿ.ಡಬ್ಲೂ-1**

**ಸಾಕ್ಷಿಯನ್ನು ದಿನಾಂಕಃ 09.12.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರಿದ ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಚಾಸಾ-2 ನನ್ನ ಮಗ. ಚಾಸಾ-3 ಮತ್ತು 4 ನನಗೆ ಪರಿಚಯವಿರುತ್ತಾರೆ. ನನ್ನನ್ನು ಹೀನಾಮಾನವಾಗಿ ಬೈದಿರುತ್ತಾರೆ. ನನ್ನ ಮಗ ಚಾಸಾ-2 ಗಲಾಟೆ ಬಿಡಿಸಲು ಬಂದಾಗ 4 ಮತ್ತು 5 ನೇ ಆರೋಪಿಗಳು ಕಲ್ಲಿನಿಂದ ನನ್ನ ಮಗನ ತಲೆಗೆ ಹೊಡೆದು ನನ್ನನ್ನು ಮತ್ತು ನನ್ನ ಮಗನನ್ನು ಕೊಲೆ ಮಾಡುವುದಾಗಿ ಹೇಳಿರುತ್ತಾರೆ. ಚಾಸಾ-3 ಮತ್ತು 4 ಬಂದು ಗಲಾಟೆ ಬಿಡಿಸಿರುತ್ತಾರೆ. ನಂತರ ನಾವು ನನ್ನ ಮಗನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ.

ಗಲಾಟೆಯ ಬಗ್ಗೆ ಗ್ರಾಮದ ಯಜಮಾನರಿಗೆ ತಿಳಿಸಿದಾಗ ಅವರು ತೀರ್ಮಾನ ಮಾಡುವುದಾಗಿ ಹೇಳಿದ್ದು, ನಂತರ ಆರೋಪಿಗಳು ಒಪ್ಪದೆ ಇದ್ದುದರಿಂದ ದೂರು ಕೊಟ್ಟಿರುತ್ತೇನೆ. ಸಾಕ್ಷಿಯು ದೂರಿನಲ್ಲಿರುವ ತನ್ನ ಹೆಬ್ಬೆಟ್ಟು ಗುರುತನ್ನು ನೋಡಿ ಗುರುತಿಸಿದ್ದರಿಂದ, ದೂರನ್ನು **ನಿಪಿ-1** ಎಂದು, ಅದರಲ್ಲಿರುವ ಸಾಕ್ಷಿಯ ಹೆಬ್ಬೆಟ್ಟು ಗುರುತನ್ನು **ನಿಪಿ-1(ಎ)** ಎಂದು ಗುರುತಿಸಲಾಯಿತು.

ನಾನು ದೂರು ಕೊಟ್ಟ ನಂತರ ಪೊಲೀಸರು ನಮ್ಮ ಜಾಗಕ್ಕೆ ಬಂದು ಸ್ಥಳದಲ್ಲಿದ್ದ ಕಲ್ಲನ್ನು ತೆಗೆದುಕೊಂಡಿದ್ದು, ಅಲ್ಲಿ ಬರವಣಿಗೆ ಮಾಡಿರುತ್ತಾರೋ, ಇಲ್ಲವೋ ನನಗೆ ಗೊತ್ತಾಗಿರುವುದಿಲ್ಲ. ಆ ಸಮಯದಲ್ಲಿ ಗ್ರಾಮಸ್ಥರು ಇದ್ದರು. ಈಗ ನನಗೆ ತೋರಿಸುತ್ತಿರುವ ದಾಖಲೆಯಲ್ಲಿ ನನ್ನ ಹೆಬ್ಬೆಟ್ಟು ಗುರುತು ಇದ್ದು, ಸದರಿ ಹೆಬ್ಬೆಟ್ಟು ಗುರುತನ್ನು ಗಲಾಟೆಯಾದ ಸ್ಥಳದಲ್ಲಿ ಪೊಲೀಸರು ಹಾಕಿಸಿಕೊಂಡಿರುತ್ತಾರೆ. ಸಾಕ್ಷಿಯು ಸ್ಥಳ ಮಹಜರ್ ನಲ್ಲಿರುವ ಹೆಬ್ಬೆಟ್ಟು ಗುರುತನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ-2** ಎಂದು, ಅದರಲ್ಲಿರುವ ಸಾಕ್ಷಿಯ ಹೆಬ್ಬೆಟ್ಟು ಗುರುತನ್ನು **ನಿಪಿ-2(ಎ)** ಎಂದು ಗುರುತಿಸಲಾಯಿತು. ಕಲ್ಲನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದಲ್ಲಿರುವ ಕಲ್ಲುಗಳನ್ನು ನೋಡಿ

ಗುರುತಿಸಿರುತ್ತಾರೆ. ಅವುಗಳನ್ನು ಕ್ರಮವಾಗಿ ಮುದ್ದೆ ಮಾಲು-1 ಮತ್ತು 2 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀಸವಾಲುಃ ಸ.ಸ.ಅ ರವರಿಂದಃ**

ದಿನಾಂಕ 24.02.2017 ರಂದು ಪೊಲೀಸರು ಗಲಾಟೆ ನಡೆದ ಸ್ಥಳಕ್ಕೆ ಬಂದು ಚಾಸಾ-8 ಮತ್ತು 9 ರವರ ಸಮಕ್ಷಮ ಮಹಜರ್ ಮಾಡಿ ಎರಡು ಕಲ್ಲುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿ. ನಂತರ ಪೊಲೀಸರು ಮಹಜರ್ ನಲ್ಲಿರುವ ವಿಷಯಗಳನ್ನು ಓದಿ ಹೇಳಿದ ನಂತರ ಹೆಬ್ಬೆಟ್ಟು ಗುರುತು ಹಾಕಿರುತ್ತೇನೆ ಎಂದರೆ ಸರಿ.

**ಪಾಟೀಸವಾಲುಃ ಆರೋಪಿಗಳ ಪರ ಶ್ರೀ ಕೆ.ಎಸ್.ಕೆ, ವಕೀಲರಿಂದಃ**

ನಾನು 20 ವರ್ಷಗಳಿಂದಲೂ ಹೆಡಿಯಾಲದಲ್ಲಿ ವಾಸವಾಗಿದ್ದೇನೆ. ನನ್ನ ಮಾವ ಕಾಳಮಾದಯ್ಯನವರಿಗೆ ಮಹದೇವಯ್ಯ, ಮನಿಯಯ್ಯ ಮತ್ತು ಶಿವಲಿಂಗಯ್ಯ ಎಂಬ 3 ಜನ ಮಕ್ಕಳಿದ್ದರು ಎಂದರೆ ಸರಿ. ಶಿವಲಿಂಗಯ್ಯರವರಿಗೆ ಕಣ್ಣು ಕಾಣಿಸುತ್ತಿರಲಿಲ್ಲವಾದ್ದರಿಂದ ಅವರು ಅವಿವಾಹಿತರಾಗಿ ಮೃತಪಟ್ಟಿರುತ್ತಾರೆ ಎಂದರೆ ಸರಿ. ನನ್ನ ಗಂಡ ಮತ್ತು ಅವರ ಅಣ್ಣ-ತಮ್ಮಂದಿರು ಭಾಗ ಮಾಡಿಕೊಂಡಿದ್ದರು ಎಂದರೆ ಸರಿ. ಅದರಂತೆ ಎಲ್ಲರೂ ಸಮಭಾಗ ಮಾಡಿಕೊಂಡಿದ್ದರು ಎಂದರೆ ಸರಿ. ಆರೋಪಿಗಳು ಅವರ ಭಾಗಕ್ಕೆ ಬಂದ ಜಾಗದಲ್ಲಿ ಮನೆ ಕಟ್ಟುತ್ತಿದ್ದರು ಎಂದರೆ ನಮ್ಮ ಜಾಗದಲ್ಲಿ ಕಟ್ಟುತ್ತಿದ್ದರು. ಆರೋಪಿಗಳು ಮನೆ ಕಟ್ಟಿರುತ್ತಾರೆ ಎಂದರೆ ಸರಿ. ಜಾಗದ ವಿಚಾರವಾಗಿ ನನ್ನ ಮತ್ತು ಆರೋಪಿಗಳ ನಡುವೆ ಸಿವಿಲ್ ವ್ಯಾಜ್ಯ ನಡೆದಿರುತ್ತದೆ ಎಂದರೆ ಸರಿ. ಆರೋಪಿಗಳು ಅವರ ತಂದೆಯ ಜಾಗದಲ್ಲಿ ಮನೆ ಕಟ್ಟಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಮೂಲ ದಾವೆ ಸಂಖ್ಯೆ 306/2018 ರಂತೆ ಪ್ರಕರಣ ನಡೆದಿದ್ದು, ಆ ಪ್ರಕರಣಕ್ಕೆ ನಾನು ಮತ್ತು

ನನ್ನ ಮಗ ಹಾಜರಾಗುತ್ತಿದ್ದೆವು ಎಂದರೆ ಸರಿ. ಸದರಿ ದಾವೆಯಲ್ಲಿ ಆದೇಶವಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಮ್ಮ ಜಾಗಕ್ಕೆ ನಾವು ಕಂದಾಯ ಕಟ್ಟಿದ್ದು, ಆರೋಪಿಗಳು ಅವರ ಜಾಗಕ್ಕೆ ಸಂಬಂಧಿಸಿದಂತೆ ಕಂದಾಯ ಕಟ್ಟಿರುತ್ತಾರೆ ಎಂದರೆ ಸರಿ. ನನ್ನ ಮೈದುನ ಶಿವಲಿಂಗಯ್ಯರವರ ಜಮೀನನ್ನು ನನ್ನ ಹೆಸರಿಗೆ ಖಾತೆಯಾಗಿತ್ತು ಎಂದರೆ ಸರಿ. ಏಕೆಂದರೆ ಅವರು ನಮ್ಮ ಜೊತೆಯಲ್ಲಿಯೇ ಇದ್ದರು. ಆರೋಪಿಗಳು ಮೂಲದಾವೆ ಸಂಖ್ಯೆ 307/2018 ರಂತೆ ದಾವೆ ಸಲ್ಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿಗಳಿಗು ಜಾಗದಲ್ಲಿ ಸಮಭಾಗ ಕೊಡಬೇಕೆಂದು ಗ್ರಾಮದವರು ಹೇಳಿದ್ದರು ಎಂದರೆ ಸರಿ. ನನ್ನ ಮೈದುನನ ಆಸ್ತಿಯನ್ನು ಹೇಗಾದರೂ ಮಾಡಿ ಕಬಳಿಸುವ ಉದ್ದೇಶದಿಂದ ಈ ಸುಳ್ಳು ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಗಲಾಟೆ ಸಮಯದಲ್ಲಿ ಸುಮಾರು 7-8 ಜನರಿದ್ದರು. ಗಲಾಟೆ ಸಮಯದಲ್ಲಿ ಆರೋಪಿಗಳೆಲ್ಲರೂ ಇದ್ದರು. ಗಲಾಟೆ ನಡೆಯಿತು ಎಂದು ಹೇಳಿದ ಸಮಯದಲ್ಲಿ ಯಾವ ಆರೋಪಿಗಳು ಕೂಡ ಇರಲಿಲ್ಲ ಎಂದರೆ ಸರಿಯಲ್ಲ. 4 ಮತ್ತು 5 ನೇ ಆರೋಪಿಗಳು ಕಲ್ಲಿನಿಂದ ನನ್ನ ಮಗನಿಗೆ ಹೊಡೆದಿರುತ್ತಾರೆ. 4 ನೇ ಆರೋಪಿಗೆ ಕಣ್ಣು ಕಾಣಿಸುವುದಿಲ್ಲ ಎಂದರೆ ಸರಿಯಲ್ಲ. 4 ನೇ ಆರೋಪಿ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ಕೆಲಸ ಮಾಡುತ್ತಾರೆ ಎಂದರೆ ಸರಿ. ಗಲಾಟೆ ಸಮಯದಲ್ಲಿ ಹಾಜರಿದ್ದ ಊರಿನವರ ಹೆಸರನ್ನು ನನಗೆ ಹೇಳಲಾಗುವುದಿಲ್ಲ. ದೂರನ್ನು ಪೊಲೀಸರು ಬರೆದಿರುತ್ತಾರೆ. ದೂರಿಗೆ ಪೊಲೀಸರು ನನ್ನ ಹೆಬ್ಬೆಟ್ಟು ಗುರುತು ಹಾಕಿಸಿಕೊಂಡಿರುತ್ತಾರೆ. ಮುದ್ದೆ ಮಾಲುಗಳನ್ನು ಈ ದಿನ ಮೊದಲ ಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ ಎಂದರೆ ಹಲ್ಲೆ ಮಾಡುವಾಗ ನೋಡಿರುತ್ತೇನೆ. ಮುದ್ದೆ ಮಾಲುಗಳನ್ನು ಊರಿನವರು ಕೊಟ್ಟಿರುತ್ತಾರೆ. ಪೊಲೀಸರು ನಮ್ಮ ಊರಿಗೆ ಬಂದು ಯಾವುದೇ ಮಹಜರ್ ಮಾಡಿಲ್ಲ ಮತ್ತು ನಾನು ಠಾಣೆಗೆ ಹೋಗಿ ಮಹಜರ್ ಗೆ ಹೆಬ್ಬೆಟ್ಟು ಗುರುತು ಹಾಕಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗಳು ನನ್ನ ವಿರುದ್ಧವೂ ದೂರು

**ಪಿ.ಡಬ್ಲೂ-1**

ಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿಗಳು ಜಾಗದ ವಿಚಾರವಾಗಿ ನಮ್ಮ ಜೊತೆ ಗಲಾಟೆ ಮಾಡಿ ನನ್ನ ಮಗನಿಗಾಗಲಿ, ನನಗಾಗಲಿ ಹಲ್ಲೆ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಹೇಳಿದಂತೆ ಆರೋಪಿಗಳು ಯಾವುದೇ ರೀತಿ ಜೀವ ಬೆದರಿಕೆ ಹಾಕಿಲ್ಲ ಎಂದರೆ ಸರಿಯಲ್ಲ. ಆರೋಪಿಗಳು ಯಾವತ್ತೂ ನಮ್ಮ ಜಾಗಕ್ಕೆ ಬಂದು ಗಲಾಟೆ ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿಗಳ ಮೇಲಿನ ದ್ವೇಷದಿಂದ ಸುಳ್ಳು ದೂರು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಮುದ್ದೆ ಮಾಲು ತರಹದ ಕಲ್ಲುಗಳು ಎಲ್ಲಾ ಕಡೆ ಸಿಗುತ್ತವೆ ಎಂದರೆ ಸರಿ. ನನ್ನ ಮೈದುನನ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಈ ಸುಳ್ಳು ದೂರು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗಳಿಗು, ಈ ಪ್ರಕರಣಕ್ಕೂ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ:** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ದಿವಾನಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**

**ನಂಜನಗೂಡು.**